# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ದಿನಾಂಕ: 12-07-2021

ಸಂಖ್ಯೆ: ಸ.ಅ/ವಾ-164/ಪಿಆರ್/ /2021-22

## ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 12-07-2020 ರಂದು ವಾರ್ಡ್ ಸಂಖ್ಯೆ: 164, ವಿದ್ಯಾಪೀಠದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ

ಸಮಯ : ಪೂರ್ವಾಹ್ನ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಆರ್. ವಿಜಯ್‌ಕುಮಾರ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ ಟಿ. ಕೃಷ್ಣಮೂರ್ತಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-164, ವಿದ್ಯಾಪೀಠ |
| 3 | ಶ್ರೀ ವಿಷಕಂತಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್-164, ವಿದ್ಯಾಪೀಠ |
| 4 | ಶ್ರೀ ಎಂ. ಸುರೇಶ್ | ಕಂದಾಯ ವಸೂಲಿಗಾರರು |
| 5 | ಡಾ॥ ಮಧುಸೂದನ್ | ವೈದ್ಯಾಧಿಕಾರಿಗಳು |
| 6 | ಶ್ರೀ ಸುನಿಲ್ | ಹಿರಿಯ ಆರೋಗ್ಯ ಪರಿವೀಕ್ಷಕರು |
| 7 | ಶ್ರೀ ಧವಳೇಶ್ | ಸಹಾಯಕ ಅಭಿಯಂತರರು, ಬೆಸ್ಕಾಂ |
| 8 | ಜಯರಾಮೇ ಗೌಡ | ಸ್ಯಾನಿಟರಿ ಧಫೇದಾರ್ |
| 9 | ಶ್ರೀಮತಿ ಲಕ್ಷ್ಮಿ | ಕಿರಿಯ ಆರೋಗ್ಯ ಪರಿವೀಕ್ಷಕರು |
| 10 | ಶ್ರೀ ಕುಮಾರ್ | ಸಾರ್ವಜನಿಕರು |
| 11 | ಶ್ರೀ ಯೋಗೀಶ್ | ಸಾರ್ವಜನಿಕರು |
| 12 | ಶ್ರೀ ಆರ್. ವಿಜಯ್‌ಕುಮಾರ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು. ಸಭೆಯಲ್ಲಿ ಜೂನ್ ತಿಂಗಳ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.

1. ಬೆಸ್ಕಾಂ ರವರು ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಅಗೆತ ಮಾಡಿ ಕೇಬಲ್ ಅಳವಡಿಸಿದ್ದು, ಸರಿಯಾಗಿ ರಸ್ತೆಗಳನ್ನು ಸರಿಪಡಿಸದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ಅಗೆದಿರುವ ರಸ್ತೆಗಳನ್ನು ಸರಿಪಡಿಸದಿದ್ದಲ್ಲಿ ರಸ್ತೆ ಅಪಘಾತಗಳು ಸಂಭವಿಸುವ ಸಾಧ್ಯತೆ ಇರುತ್ತದೆ ಎಂದು ತಿಳಿಸಿದರು. ಹಾಗೂ ಹೆಚ್ಚುವರಿಯಾಗಿ ಸ್ಥಳದಲ್ಲೇ ಬಿಟ್ಟಿರುವ ಕೇಬಲ್‌ಗಳನ್ನು ತೆರವುಗೊಳಿಸಲು ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸುವಂತೆ ವಾರ್ಡ್ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ತಿಳಿಸಿರುತ್ತಾರೆ.

2. ವಾರ್ಡ್ 164 ರಲ್ಲಿನ ರಸ್ತೆ ಗುಂಡಿಗಳ ಬಗ್ಗೆ ಚರ್ಚಿಸಲಾಗಿ ಹೊಸದಾಗಿ ಗುರ್ತಿಸಲಾದ ರಸ್ತೆ ಗುಂಡಿಗಳನ್ನು ಜಲಮಂಡಳಿ ಹಾಗೂ ಬೆಸ್ಕಾಂ ಹಾಗೂ ಇನ್ನಿತರ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳಿಂದ ರಸ್ತೆ ಗುಂಡಿಗಳನ್ನು ಮುಚ್ಚಲು ಅಗತ್ಯ ಕ್ರಮಗಳನ್ನು ತುರ್ತಾಗಿ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು.

3. ವಾರ್ಡ್ 164ರ ವ್ಯಾಪ್ತಿಯಲ್ಲಿ ಕಂದಾಯ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಲಾಗಿ ಕಂದಾಯ ವಸೂಲಾತಿಯಲ್ಲಿ ಪ್ರಗತಿ ಸಾಧಿಸಲು ಸ್ಥಳೀಯ ಕಂದಾಯ ಪರಿವೀಕ್ಷಕರು ರವರಿಗೆ ಸಭೆಯಲ್ಲಿ ತಿಳಿಸಿರುತ್ತಾರೆ.

4. ವಾರ್ಡ್ 164ರ ವ್ಯಾಪ್ತಿಯಲ್ಲಿ ಬೆಂಗಳೂರು ಜಲ ಮಂಡಳಿ ವತಿಯಿಂದ ಲೋ ಲೇಯಿಂಗ್ ಏರಿಯಾಗಳಲ್ಲಿ (Low Laying Area) ಮ್ಯಾನ್‌ಹೋಲ್‌ಗಳನ್ನು ಸ್ವಚ್ಚಗೊಳಿಸಲು ತಿಳಿಸಲಾಗಿರುತ್ತದೆ, ಕುಡಿಯುವ ನೀರಿನ ಸಮಸ್ಯೆಗಳಿದ್ದಲ್ಲಿ ಸರಿಪಡಿಸಲು ಸಭೆಯಲ್ಲಿ ಸೂಚಿಸಿರುತ್ತಾರೆ

5. ಬೆಸ್ಕಾಂ ಇಲಾಖೆ ವತಿಯಿಂದ ಈಗಾಗಲೇ ಅಗೆದಿರುವ ರಸ್ತೆಗಳನ್ನು ಸರಿಪಡಿಸಿ ಅಗೆದಿರುವ ಹೆಚ್ಚುವರಿ ಮಣ್ಣನ್ನು ತೆರವುಗೊಳಿಸಲು ಸೂಚಿಸಲಾಗಿದೆ ಹಾಗೂ ಬೆಸ್ಕಾಂ ರವರು ಕಡಿದಿರುವ ಮರದ ಕೊಂಬೆಗಳನ್ನು ತಮ್ಮ ಇಲಾಖೆ ವತಿಯಿಂದ ತೆರವುಗೊಳಿಸಲು ತಿಳಿಸಲಾಗಿದೆ.

6. ವಾರ್ಡ್ ವ್ಯಾಪ್ತಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ (ಸಿ.ಟಿ ಬೆಡ್) ಹಾಗೂ ಸಂಚಾರಿ ಟೆಸ್ಟಿಂಗ್ ಸೆಂಟರ್‌ನಲ್ಲಿ ಗಂಟಲು ದ್ರವ ಪರೀಕ್ಷೆಯನ್ನು ಸಮರ್ಪಕವಾಗಿ ನಿರ್ವಹಿಸಲು ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.